ದೂರವಾಣಿ ಸಂಖ್ಯೆ: 080-22212343
ಫ್ಯಾಕ್ಸ್ ಸಂಖ್ಯೆ: 080-22278803
ಅಂತರ್ಜಾಲ: www.kptcl.com
ಇ-ಮೇಲ್ ವಿಳಾಸ: director.ahr.kptcl@gmail.com

# ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ

Corporate Identity Number (CIN): U40109KA1999SGC025521

**(ಕಂಪನಿಯ ಅಧಿಕೃತ ಕಚೇರಿ: ನಿಗಮ ಕಾರ್ಯಾಲಯ, ಕಾವೇರಿ ಭವನ, ಕೆ.ಜಿ.ರಸ್ತೆ, ಬೆಂಗಳೂರು-560 009)**

**ಸಂಖ್ಯೆ: ಕವಿಪ್ರನಿನಿ/ಬಿ16/819/2019-20** **ದಿನಾಂಕ:** 28 NOV 2019

## ಸುತ್ತೋಲೆ

**ವಿಷಯ:** ಸ್ಪಷ್ಟೀಕರಣ ಮತ್ತು ಅನುಮೋದನೆಗೆ ಸಂಬಂಧಿಸಿದಂತೆ ಕವಿಪ್ರನಿನಿ ನಿಗಮ ಕಾರ್ಯಾಲಯಕ್ಕೆ ನೇರವಾಗಿ ಪತ್ರ ವ್ಯವಹಾರ ಮಾಡುತ್ತಿರುವ ಬಗ್ಗೆ.

*****

ಕವಿಪ್ರನಿನಿಯ ಮತ್ತು ವಿವಿಧ ವಿದ್ಯುತ್ ಸರಬರಾಜು ಕಂಪನಿಗಳ ವೃತ್ತ ಕಚೇರಿ, ವಿಭಾಗ ಕಚೇರಿ, ಮತ್ತು ಉಪವಿಭಾಗ ಕಚೇರಿಗಳಿಂದ ಹಲವಾರು ವಿಷಯಗಳಿಗೆ ಸಂಬಂಧಿಸಿದಂತೆ ಸ್ಪಷ್ಟೀಕರಣ ಮತ್ತು ಅನುಮೋದನೆ ಕೋರಿ ಕವಿಪ್ರನಿನಿ ನಿಗಮ ಕಾರ್ಯಾಲಯಕ್ಕೆ ನೇರವಾಗಿ ಪತ್ರ ವ್ಯವಹಾರ ನಡೆಸುತ್ತಿರುವುದು ನಿಗಮದ ಗಮನಕ್ಕೆ ಬಂದಿರುತ್ತದೆ. ಈ ರೀತಿಯ ಪತ್ರ ವ್ಯವಹಾರಗಳಲ್ಲಿ ಒಂದು ಸಾಮಾನ್ಯ ವಿಷಯಕ್ಕೆ ಸಂಬಂಧಿಸಿದಂತೆ ವೃತ್ತ/ವಿಭಾಗ/ಉಪವಿಭಾಗಗಳಿಗೆ ಈಗಾಗಲೇ ಸ್ಪಷ್ಟೀಕರಣವನ್ನು ನೀಡಿದ್ದರೂ ಸಹ, ಮತ್ತೊಮ್ಮೆ ಅದೇ ರೀತಿಯ ಬೇರೊಂದು ಪ್ರಕರಣಕ್ಕೆ ಸಂಬಂಧಿಸಿದಂತೆ ಸ್ಪಷ್ಟೀಕರಣವನ್ನು ಕೋರಲಾಗುತ್ತಿದೆ ಹಾಗೂ ಈಗಾಗಲೇ ನಿಗಮದ ಆದೇಶಗಳು, ಸುತ್ತೋಲೆಗಳು ಮತ್ತು ನಿಗಮದ ಕೈಪಿಡಿಗಳಲ್ಲಿ ಸ್ಪಷ್ಟವಾದ ಸೂಚನೆಗಳಿದ್ದಾಗ್ಯೂ, ಸ್ಪಷ್ಟೀಕರಣಗಳನ್ನು ಕೋರಲಾಗುತ್ತಿದೆ. ಇತ್ತೀಚಿನ ದಿನಗಳಲ್ಲಿ ಕವಿಪ್ರನಿನಿ ನಿಗಮ ಕಾರ್ಯಾಲಯಕ್ಕೆ ಈ ರೀತಿಯ ಪತ್ರವ್ಯವಹಾರಗಳು ಹೆಚ್ಚಾಗುತ್ತಿರುವುದರಿಂದ ನಿಗಮದ ದೈನಂದಿನ ಕೆಲಸ ಕಾರ್ಯಗಳಿಗೆ ಅನಾವಶ್ಯಕ ವಿಳಂಬವಾಗುತ್ತಿದೆ.

ಸ್ಪಷ್ಟೀಕರಣ ಕೋರುವ ವೃತ್ತ/ವಿಭಾಗ/ ಉಪವಿಭಾಗಗಳ ಕಚೇರಿಗಳ ಮುಖ್ಯಸ್ಥರು ನಿಗಮದ ಆದೇಶಗಳು/ಸುತ್ತೋಲೆಗಳು/ ಸ್ಪಷ್ಟೀಕರಣಗಳು ಮತ್ತು ನಿಗಮದ ಕೈಪಿಡಿಗಳನ್ನು ಸರಿಯಾಗಿ ಅರ್ಥೈಸಿಕೊಂಡು ನೌಕರರ ಮನವಿಯ ಬಗ್ಗೆ ಶೀಘ್ರವಾಗಿ ಕ್ರಮ ತೆಗೆದುಕೊಳ್ಳದೆ, ಸ್ಪಷ್ಟೀಕರಣಕ್ಕಾಗಿ ನಿಗಮ ಕಾರ್ಯಾಲಯಕ್ಕೆ ನೇರವಾಗಿ ಪತ್ರ ವ್ಯವಹಾರ ಮಾಡಿ ಕಾಲವಿಳಂಬ ಮಾಡುತ್ತಿರುವುದು ಹಾಗೂ ನೌಕರರ ಸಮಸ್ಯೆಗಳನ್ನು ಇತ್ಯರ್ಥಪಡಿಸುವಲ್ಲಿ ಬಹಳ ವಿಳಂಬ ಮಾಡುತ್ತಿರುವುದನ್ನು ನಿಗಮವು ಗಂಭೀರವಾಗಿ ಪರಿಗಣಿಸಿದೆ.

ಆದಾಗ್ಯೂ ವಿವಿಧ ವಿದ್ಯುತ್ ಸರಬರಾಜು ಕಂಪನಿಯ ವೃತ್ತ/ವಿಭಾಗ/ ಉಪವಿಭಾಗಗಳ ಕಚೇರಿಗಳ ಮುಖ್ಯಸ್ಥರು ತಮ್ಮ ಕಂಪನಿಯ ಪ್ರಧಾನ ವ್ಯವಸ್ಥಾಪಕರು (ಆಡಳಿತ ಮತ್ತು ಮಾನವ ಸಂಪನ್ಮೂಲ) ರವರೊಡನೆ ಪತ್ರ ವ್ಯವಹಾರ ನಡೆಸಿ ನಿಗಮದ ಆದೇಶ/ನಿಯಮಗಳ ಅನುಸಾರ ಸೂಕ್ತ ಸ್ಪಷ್ಟೀಕರಣ ಪಡೆಯಬಹುದಾಗಿದೆ. ಅದೇ ರೀತಿ, ಕವಿಪ್ರನಿನಿ ಕಚೇರಿಗಳ ಅಧಿಕಾರಿಗಳು ಸಂಬಂಧಪಟ್ಟ ಪ್ರಸರಣ ವಲಯದ ಮುಖ್ಯ ಇಂಜಿನಿಯರ್(ವಿ) ರವರೊಡನೆ ಪತ್ರ ವ್ಯವಹಾರ ನಡೆಸಿ ಅನುಮೋದನೆ/ಸ್ಪಷ್ಟೀಕರಣವನ್ನು ಪಡೆಯಬಹುದಾಗಿದೆ.

ಎಸ್ಕಾಂಗಳ ಪ್ರಧಾನ ವ್ಯವಸ್ಥಾಪಕರು (ಆಡಳಿತ ಮತ್ತು ಮಾನವ ಸಂಪನ್ಮೂಲ) ಅಥವಾ ಕವಿಪ್ರನಿನಿಯ ಪ್ರಸರಣ ವಲಯದ ಮುಖ್ಯ ಇಂಜಿನಿಯರ್(ವಿ) ರವರುಗಳು ವೃತ್ತ/ವಿಭಾಗ/ಉಪವಿಭಾಗಗಳಿಂದ ಬರುವ ಪತ್ರಗಳಿಗೆ ನಿಯಮಗಳನುಸಾರ ಸೂಕ್ತ ಸ್ಪಷ್ಟೀಕರಣಗಳನ್ನು ನೀಡುವಂತೆಯೂ ಮತ್ತು ಒಂದು ವೇಳೆ ನಿಗಮದ ನಿಯಮಗಳನ್ನು ಅರ್ಥೈಸಿಕೊಳ್ಳುವಲ್ಲಿ ಯಾವುದೇ ಗೊಂದಲ ಅಥವಾ ಸಂದೇಹ ಉಂಟಾದಲ್ಲಿ ಅಥವಾ ನಿಗಮದ ಅನುಮೋದನೆಯ ಅವಶ್ಯಕತೆ ಇರುವ ಪ್ರಕರಣಗಳಲ್ಲಿ ಮಾತ್ರ ನಿಗಮ ಕಾರ್ಯಾಲಯದೊಡನೆ ಪತ್ರ ವ್ಯವಹಾರ ನಡೆಸಿ ಅನುಮೋದನೆ/ಸ್ಪಷ್ಟೀಕರಣವನ್ನು ಪಡೆಯುವಂತೆ ಈ ಮೂಲಕ ಸೂಚಿಸಲಾಗಿದೆ.

ಇನ್ನು ಮುಂದೆ ಉಪವಿಭಾಗ, ವಿಭಾಗ ಮತ್ತು ವೃತ್ತ ಮಟ್ಟದ ಕಚೇರಿಗಳಿಂದ ನೇರವಾಗಿ ನಿಗಮ ಕಾರ್ಯಾಲಯಕ್ಕೆ ಪತ್ರ ವ್ಯವಹಾರ ಮಾಡಿದಲ್ಲಿ, ಸದರಿ ವಿಷಯವನ್ನು ಅತ್ಯಂತ ಗಂಭೀರವಾಗಿ ಪರಿಗಣಿಸಲಾಗುವುದು ಹಾಗೂ ಅಂತಹ ಪತ್ರಗಳಿಗೆ ಯಾವುದೇ ಮಾಹಿತಿ/ಸ್ಪಷ್ಟೀಕರಣಗಳನ್ನು ನಿಗಮದಿಂದ ನೀಡಲಾಗುವುದಿಲ್ಲ. ಆದಾಗ್ಯೂ, ಈ ಸೂಚನೆಯನ್ನು ಮೀರಿ ಪತ್ರ ವ್ಯವಹಾರ ನಡೆಸುವ ಅಧಿಕಾರಿಗಳ ವಿರುದ್ಧ ನಿಯಮಾನುಸಾರ ಸೂಕ್ತ ಕ್ರಮ ಕೈಗೊಳ್ಳಲಾಗುವುದು.

ಈ ಸುತ್ತೋಲೆಯ ಅಂಶಗಳನ್ನು ಕಟ್ಟುನಿಟ್ಟಾಗಿ ಪಾಲಿಸುವಂತೆ ತಿಳಿಸಲಾಗಿದೆ.

28/11/17

ನಿರ್ದೇಶಕರು
(ಆಡಳಿತ ಮತ್ತು ಮಾನವ ಸಂಪನ್ಮೂಲ)

<u>ಗೆ:</u>

1. ವ್ಯವಸ್ಥಾಪಕ ನಿರ್ದೇಶಕರು, ಬೆಸ್ಕಾಂ/ಜೆಸ್ಕಾಂ/ಹೆಸ್ಕಾಂ/ಮೆಸ್ಕಾಂ/ಸೆಸ್ಕ್/ಪಿ.ಸಿ.ಕೆ.ಎಲ್.
2. ಎಲ್ಲಾ ನಿರ್ದೇಶಕರು(ತಾಂತ್ರಿಕ), ಎಸ್ಕಾಂಗಳು.
3. ಎಲ್ಲಾ ಆರ್ಥಿಕ ಸಲಹೆಗಾರರು, ಕವಿಪ್ರನಿನಿ/ಎಸ್ಕಾಂಗಳು.
4. ಎಲ್ಲಾ ಮುಖ್ಯ ಇಂಜನಿಯರ್(ವಿ), ಕವಿಪ್ರನಿನಿ/ಎಸ್ಕಾಂಗಳು.
5. ಹಿರಿಯ ಆಪ್ತ ಕಾರ್ಯದರ್ಶಿಗಳು, ವ್ಯವಸ್ಥಾಪಕ ನಿರ್ದೇಶಕರು/ನಿರ್ದೇಶಕರು (ಪ್ರಸರಣ)/ನಿರ್ದೇಶಕರು (ಹಣಕಾಸು)/ ನಿರ್ದೇಶಕರು (ಆಡಳಿತ ಮತ್ತು ಮಾನವ ಸಂಪನ್ಮೂಲ), ಕವಿಪ್ರನಿನಿ.

www.kptcl.com/eprasarana for information of:

6. ಎಲ್ಲಾ ಅಧೀಕ್ಷಕ ಇಂಜನಿಯರ್ (ವಿ)/ನಿಯಂತ್ರಣಾಧಿಕಾರಿಗಳು, ಕವಿಪ್ರನಿನಿ/ಎಸ್ಕಾಂಗಳು.
7. ಎಲ್ಲಾ ಕಾರ್ಯನಿರ್ವಾಹಕ ಇಂಜನಿಯರ್ (ವಿ)/ಉಪ ಲೆಕ್ಕನಿಯಂತ್ರಣಾಧಿಕಾರಿಗಳು, ಕವಿಪ್ರನಿನಿ/ಎಸ್ಕಾಂಗಳು.
8. ಎಲ್ಲಾ ಅಧಿಕಾರಿಗಳು, ನಿಗಮ ಕಾರ್ಯಾಲಯ, ಕವಿಪ್ರನಿನಿ, ಕಾವೇರಿ ಭವನ, ಬೆಂಗಳೂರು.
9. ಕ್ರೋಢೀಕರಣ ಘಟಕ, ಕವಿಪ್ರನಿನಿ, ಕಾವೇರಿ ಭವನ, ಬೆಂಗಳೂರು.

<u>ಪ್ರತಿಯನ್ನು ಮಾಹಿತಿಗಾಗಿ ರವಾನಿಸಿದೆ:-</u>

1. ಶ್ರೀ.ಟಿ.ಆರ್.ರಾಮಕೃಷ್ಣಯ್ಯ, ಅಧ್ಯಕ್ಷರು, ಕವಿಪ್ರನಿ ನೌಕರರ ಸಂಘ (ನೋಂದಣಿ ಸಂಖ್ಯೆ: 659), ಬೆಂಗಳೂರು ಮತ್ತು ನಿರ್ದೇಶಕರು, ಕವಿಪ್ರನಿನಿ ಹಾಗೂ ಎಲ್ಲಾ ಎಸ್ಕಾಂಗಳು.
2. ಶ್ರೀ.ಟಿ.ಎಂ.ಶಿವಪ್ರಕಾಶ್, ಅಧ್ಯಕ್ಷರು, ಕವಿಮಂ ಇಂಜನಿಯರ್‌ಗಳ ಸಂಘ, ಬೆಂಗಳೂರು, ಮತ್ತು ನಿರ್ದೇಶಕರು, ಕವಿಪ್ರನಿನಿ ಹಾಗೂ ಎಲ್ಲಾ ಎಸ್ಕಾಂಗಳು.
3. ಪ್ರಧಾನ ಕಾರ್ಯದರ್ಶಿ, ಕವಿಪ್ರನಿ ನೌಕರರ ಸಂಘ(ನೋಂದಣಿ ಸಂಖ್ಯೆ: 659), ಬೆಂಗಳೂರು.
4. ಪ್ರಧಾನ ಕಾರ್ಯದರ್ಶಿ, ಕವಿಮಂ ಇಂಜನಿಯರ್‌ಗಳ ಸಂಘ, ಬೆಂಗಳೂರು.
5. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ, ಲೆಕ್ಕಾಧಿಕಾರಿಗಳ ಸಂಘ, ಬೆಂಗಳೂರು.
6. ಪ್ರಧಾನ ಕಾರ್ಯದರ್ಶಿ, ಕವಿಮಂ, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗಗಳ ಕಲ್ಯಾಣ ಸಂಸ್ಥೆ(ರಿ), ಬೆಂಗಳೂರು.
7. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ, ಡಿಪ್ಲೋಮಾ ಇಂಜನಿಯರ್‌ಗಳ ಸಂಘ, ಬೆಂಗಳೂರು.
8. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ/ಎಸ್ಕಾಂ ಪ.ಜಾ/ಪ.ಪಂ ಅಧಿಕಾರಿಗಳ ಸಂಘ, ಬೆಂಗಳೂರು.